## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಅಲ್ಮಾಸ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬಿಜ್ಜವಾರ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/BD/1011/2016/ARLO-1, ದಿನಾಂಕ: 16.03.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 25.02.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಬೆಂಗಳೂರು ನಗರ ಲಗ್ಗೆರೆ ಎಲ್‌ಜಿ ರಾಮಣ್ಣ ಬಡಾವಣೆಯ 2ನೇ ಕ್ರಾಸ್‌ನ ನಂ. 42ರ ನಿವಾಸಿಯಾದ ಶ್ರೀ. ಸಿ. ರಂಗನಾಥ ಬಿನ್ ನಾಗರಾಜು ತಮ್ಮ ದೂರಿನಲ್ಲಿ ತುಮಕೂರು ಮಧುಗಿರಿ ತಾಲ್ಲಕು, ಬಿಜ್ಜವಾರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ. ಅಲ್ಮಾಸ್ ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. ದೂರಿನ ಸಂಕ್ಷಿಪ್ತ ವಿವರಣೆ :- ಎದುರುದಾರರು ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಶ್ರೀಮತಿ. ಸಣ್ಣಹನುಮಕ್ಕ, ಶ್ರೀಮತಿ. ನರಸಮ್ಮ ಮತ್ತು ಶ್ರೀಮತಿ. ಜಯಮ್ಮ ರವರಿಗೆ ಶೌಚಾಲಯ ನಿರ್ಮಾಣ ಮಾಡಿದ ಬಾಬ್ತು ತಲಾ ರೂ. 8,900/- ಮಂಜೂರಾಗಿದ್ದು, ಎದುರುದಾರರು ಕೇವಲ ತಲಾ ರೂ. 4,700/- ನ್ನು ಮಾತ್ರ ಪಾವತಿ ಮಾಡಿದ್ದಾರೆ. ಆದರೆ, ಉಳಿದ ಬಾಕಿ ರೂ. 4,200/- ನ್ನು ಈವರೆವಿಗೂ ಸಹ ಪಾವತಿ ಮಾಡಿಲ್ಲ. ಈ ಬಗ್ಗೆ ಹಲವಾರು ಬಾರಿ ಎದುರುದಾರರಿಗೆ ಮನವಿ ಸಲ್ಲಿಸಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

3. ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ –

ಬಿಜ್ಜವಾರ ಗ್ರಾಮ ಪಂಚಾಯತಿಯ ಬಿಸಿ ಪಾಳ್ಯ ಗ್ರಾಮದ ಶ್ರೀಮತಿ. ಸಣ್ಣಹನುಮಕ್ಕ, ಶ್ರೀಮತಿ. ನರಸಮ್ಮ ಮತ್ತು ಶ್ರೀಮತಿ. ಜಯಮ್ಮ ರವರಿಗೆ 2013-14ನೇ ಸಾಲಿನಲ್ಲಿ ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಶೌಚಾಲಯ ಮಂಜೂರಾಗಿದ್ದು, ಸದರಿ ಯೋಜನೆಯಿಂದ ರೂ. 4,700/- ಹಾಗೂ ರೂ. 4,500/- ಗಳನ್ನು ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಿಂದ ಪಡೆಯಲು ತಿಳಿಸಲಾಗಿತ್ತು. ಅದರಂತೆ, ಸದರಿ ಫಲಾನುಭವಿಗಳಲ್ಲಿ ಶ್ರೀಮತಿ. ಜಯಮ್ಮ ರವರಿಗೆ ದಿ:24.09.2013 ರಂದು ರೂ. 2,436/- ನ್ನು ಪಾವತಿಸಿದ್ದು, ಉಳಿದ ರೂ. 2,064/- ನ್ನು

ದಿ:17.01.2014 ರಲ್ಲಿ ರೂ. 1,044/- ನ್ನು ಪಾವತಿಸಲಾಗಿದೆ. ಉಳಿದ ಮೊತ್ತವನ್ನು ತಾಂತ್ರಿಕ ಕಾರಣದಿಂದ ಪಾವತಿಸಲಾಗಿಲ್ಲವೆಂದು ಹೇಳಿದ್ದಾರೆ.

4. ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಆಕ್ಷೇಪಣೆಯಲ್ಲಿನ ಅಂಶಗಳನ್ನು ಅಲ್ಲಗಳೆದು, ದೂರಿನ ಅಂಶಗಳನ್ನು ಪುನರುಚ್ಛರಿಸಿದ್ದಾರೆ.

5. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ :-

ಬಿಜ್ಜವಾರ ಗ್ರಾಮ ಪಂಚಾಯಿತಿಯ ಬಿಸಿ ಪಾಳ್ಯ ಗ್ರಾಮದಲ್ಲಿ 2013-14 ನೇ ಸಾಲಿನ ಸ್ವಚ್ಛ ಭಾರತ ಅಭಿಯಾನ ಯೋಜನೆಯಡಿ ಶ್ರೀಮತಿ. ಸಣ್ಣಹನುಮಕ್ಕ, ಶ್ರೀಮತಿ. ನರಸಮ್ಮ ಮತ್ತು ಶ್ರೀಮತಿ. ಜಯಮ್ಮ ರವರಿಗೆ ಶೌಚಾಲಯ ನಿರ್ಮಾಣ ಮಾಡಲು ತಲಾ ರೂ. 8,900/- ಅನುದಾನ ಬಿಡುಗಡೆಯಾಗಿದ್ದು, ಅದರಲ್ಲಿ ರೂ. 4,700/- ನ್ನು ಚೆಕ್ ಮೂಲಕ ಫಲಾನುಭವಿಗಳ ಖಾತೆಗೆ ಜಮಾ ಆಗಿರುವುದು ದೂರುದಾರರು ಹಾಜರುಪಡಿಸಲಾದ ಪಾಸ್ ಬುಕ್‌ನಲ್ಲಿ ಕಂಡು ಬಂದಿದೆ. ಆದರೆ, ಉಳಿದ ರೂ. 4,200/- ನ್ನು ಪಾವತಿಸದೇ ಅನುದಾನ ಬಿಡುಗಡೆ ಮಾಡಿಲ್ಲವೆಂಬುದಾಗಿ ತಿಳಿಸಿದ್ದಾರೆ. ಆದರೆ, ಯಾವ ತಾಂತ್ರಿಕ ಕಾರಣದಿಂದ ಹಣ ಬಿಡುಗಡೆ ಮಾಡಿಲ್ಲ? ಎಂಬ ಬಗ್ಗೆ ಯಾವುದೇ ಸಕಾರಣವನ್ನು ತಿಳಿಸಿಲ್ಲ. ಎದುರುದಾರರು ಶ್ರೀಮತಿ. ಸಣ್ಣಹನುಮಕ್ಕ, ಶ್ರೀಮತಿ. ನರಸಮ್ಮ ಮತ್ತು ಶ್ರೀಮತಿ. ಜಯಮ್ಮ ರವರಿಗೆ ಶೌಚಾಲಯ ನಿರ್ಮಿಸಲು ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ನೀಡದೇ ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪ ಎಸಗಿರುವುದು ಕಂಡು ಬಂದಿದೆ.

6. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಹಾಗೂ ಎದುರುದಾರರ ಆಕ್ಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ / ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

7. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಮಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀ. ಅಲ್ಮಾಸ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬಿಜ್ಜವಾರ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ. ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/248/ಗ್ರಾಪಂಕಾ/2017 ಬೆಂಗಳೂರು, ದಿನಾಂಕ-06-04-2017.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಅಲ್ಮಾಸ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬಿಜ್ಜವಾರ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
6. ಶ್ರೀ. ಅಲ್ಮಾಸ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಬಿಜ್ಜವಾರ ಗ್ರಾಮ ಪಂಚಾಯಿತಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ.
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.